ಅ) ದೊಡ್ಡಬಳ್ಳಾಪುರ ಕ್ಷೇತ್ರಕ್ಕೆ ಹೊಸಹಳ್ಳಿ ಸಬ್‌ಸ್ಟೇಷನ್ ಮಂಜೂರು ಮಾಡಲಾಗಿದೆಯೇ; ಹಾಗಿದ್ದಲ್ಲಿ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು ಮತ್ತು ಈ ಕಾಮಗಾರಿಯು ಪೂರ್ಣಗೊಳ್ಳಲಿಕ್ಕೆ ಬೇಕಾಗುವ ಅವಧಿ ಎಷ್ಟು?

ಶ್ರೀ ವೀರಕುಮಾರ್ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಸಾಮಾನ್ಯವಾಗಿ ಬೇಸಿಗೆಯ ತಿಂಗಳುಗಳಲ್ಲಿ ನೀರಾವರಿ ಪಂಪುಸೆಟ್‌ಗಳ ವಿದ್ಯುತ್ ಬಳಕೆಯು ಹೆಚ್ಚಾಗಿರುವುದರಿಂದ ರಾಜ್ಯದಲ್ಲಿ ಸ್ವಲ್ಪ ಕಡಿಮೆ ವೋಲ್ಟೇಜ್ ಪರಿಸ್ಥಿತಿಯು ತಲೆದೋರುತ್ತದೆ. ಅದರಲ್ಲೂ ದೊಡ್ಡಬಳ್ಳಾಪುರ ತಾಲ್ಲೂಕು ಸೇರಿದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ತಾಲ್ಲೂಕುಗಳ ಪ್ರದೇಶಗಳಲ್ಲಿ ಈ ಕಡಿಮೆ ವೋಲ್ಟೇಜ್ ಪರಿಸ್ಥಿತಿಯು ಸ್ವಲ್ಪ ಹೆಚ್ಚಾಗಿರುತ್ತದೆ.

ಆ) ದೊಡ್ಡಬಳ್ಳಾಪುರ ಕ್ಷೇತ್ರದ ಹೊಸಹಳ್ಳಿ ಗ್ರಾಮದಲ್ಲಿ ಒಂದು ವಿದ್ಯುತ್ ವಿತರಣಾ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆ ಪ್ರಸ್ತುತ ಇರುವುದಿಲ್ಲ. ಆದರೆ ಇದೇ ಕ್ಷೇತ್ರದ ಹೊಸಹಳ್ಳಿ ಸಮೀಪ ಇರುವ ಗುಂಡಮ್‌ಗೆರೆ ಗ್ರಾಮದಲ್ಲಿ ಒಂದು 66:11 ಕೆ.ವಿ. ವಿದ್ಯುತ್ ಸಬ್ ಸ್ಟೇಷನ್ ಅನ್ನು ನಿರ್ಮಾಣ ಮಾಡಲು ಉದ್ದೇಶಿಸಿದೆ. ಈ ಪ್ರಸ್ತಾವನೆ ನಿಗಮದ ತಾಂತ್ರಿಕ ಸಮಿತಿಯೂ ಮಾರ್ಚ್ 99ರಲ್ಲಿ ಅನುಮೋದನೆ ನೀಡಿರುತ್ತದೆ. ಈ ಕಾಮಗಾರಿಯ ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದ್ದು, ನಿಗಮದ ಕೇಂದ್ರ ಕಚೇರಿಯ ಆಡಳಿತಾತ್ಮಕ ಮಂಜೂರಾತಿಗಾಗಿ ಈ ಯೋಜನಾ ವರದಿಯನ್ನು ಸಿದ್ಧಪಡಿಸಿದ ನಂತರ ಸಲ್ಲಿಸಲಾಗುವುದು. ಅಲ್ಲದೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಎದುರಿಸುತ್ತಿರುವ ಕಠಿಣ ಆರ್ಥಿಕ ಪರಿಸ್ಥಿತಿಯಿಂದಾಗಿ ಈ ಕಾಮಗಾರಿಯನ್ನು ನಿರ್ವಹಿಸಲು ಗ್ರಾಮೀಣ ವಿದ್ಯುದ್ದೀಕರಣ ನಿಗಮದಿಂದ ಸಾಲ ಸೌಲಭ್ಯ ಪಡೆಯುವುದು ಅವಶ್ಯಕವಾಗಿರುತ್ತದೆ. ಗ್ರಾಮೀಣ ವಿದ್ಯುದ್ದೀಕರಣ ನಿಗಮದಿಂದ ಸಾಲ ಸೌಲಭ್ಯ ಪಡೆಯಲು ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ತೆಗೆದುಕೊಳ್ಳ ಲಾಗುವುದು. ಸದರೀ ಉದ್ದೇಶಿತ ಸಬ್ ಸ್ಟೇಷನ್‌ನ ನಿರ್ಮಾಣಕ್ಕಾಗಿ ಬೇಕಾಗುವ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. ಗ್ರಾಮೀಣ ವಿದ್ಯುದ್ದೀಕರಣ ನಿಗಮದಿಂದ ಸಾಲ ಸೌಲಭ್ಯ ದೊರೆತ ನಂತರ, ನಿಗಮದ ಕೇಂದ್ರ ಕಚೇರಿಯಿಂದ ಸದರೀ ಕಾಮಗಾರಿಯ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ಹಾಗೂ ಭೂ ಸ್ವಾಧೀನ ಪಡಿಸಿಕೊಂಡ ನಂತರ ಈ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಕ್ರಮ ತೆಗೆದುಕೊಳ್ಳಲು ಸಾಧ್ಯವಾಗುತ್ತದೆ.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕೆರೆಗಳಲ್ಲಿ ಹೂಳೆತ್ತುವ ಬಗ್ಗೆ

1422 (1680) ಶ್ರೀ ವಿ. ಕೃಷ್ಣಪ್ಪ (ದೊಡ್ಡಬಳ್ಳಾಪುರ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಎಷ್ಟು ಕೆರೆಗಳಲ್ಲಿ ಹೂಳೆತ್ತಲು ಕ್ರಮ ತೆಗೆದುಕೊಳ್ಳಲಾಗಿದೆ :

ಆ) ಕೆರೆ ಅಂಗಳಗಳನ್ನು ಅಕ್ರಮವಾಗಿ ಒತ್ತುವರಿ ಮಾಡಿರುವುದನ್ನು ಸಕ್ರಮಗೊಳಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಎರಡು ಕೆರೆಗಳಲ್ಲಿ ಹೂಳೆತ್ತಲು ಕ್ರಮ ತೆಗೆದುಕೊಳ್ಳಲಾಗಿದೆ.

ಆ) ಕೆರೆ ಅಂಗಳಗಳನ್ನು ಅಕ್ರಮವಾಗಿ ಒತ್ತುವರಿ ಮಾಡಿರುವುದು ಕಾನೂನು ಬಾಹಿರವಾಗಿರುವುದರಿಂದ ಅದನ್ನು ಸಕ್ರಮಗೊಳಿಸಲು ಬರುವುದಿಲ್ಲ.

ರಾಜ್ಯದ ಎಲ್ಲಾ ಕೇಂದ್ರಗಳಲ್ಲಿ ಹೊಸದಾಗಿ ವಿಮಾನ ನಿಲ್ದಾಣ.

1424 (1637) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಹೊಸದಾಗಿ ವಿಮಾನ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಹಾಗಿದ್ದಲ್ಲಿ ವಿಮಾನ ನಿಲ್ದಾಣ ನಿರ್ಮಿಸಲು ಸಮೀಕ್ಷೆ ನಡೆಸಲಾದ ಜಿಲ್ಲೆಗಳಾವುವು?

ಇ) ಪ್ರತಿಯೊಂದು ಜಿಲ್ಲಾ ಕೇಂದ್ರಗಳಲ್ಲಿ ವಿಮಾನ ನಿಲ್ದಾಣಗಳನ್ನು ನಿರ್ಮಿಸಲು ತಗಲುವ ಅಂದಾಜು ವೆಚ್ಚವೆಷ್ಟು?

ಈ) ಪ್ರತಿಯೊಂದು ಜಿಲ್ಲಾ ಕೇಂದ್ರಗಳಿಗೂ ವಿಮಾನ ನಿಲ್ದಾಣ ನಿರ್ಮಿಸಿದರೆ ವಿಮಾನದ ಲಭ್ಯತೆ ಹಾಗೂ ಪ್ರಯಾಣಿಕರ ಬೇಡಿಕೆ ಬಗ್ಗೆ ಸರ್ಕಾರ ಆಲೋಚಿಸಿದೆಯೇ?

ಉ) ಇದಕ್ಕಾಗಿ ಸರ್ಕಾರ 2000-2001ರಲ್ಲಿ ಖರ್ಚು ಮಾಡಲಿರುವ ಹಣವೆಷ್ಟು?

ಊ) ಕೇಂದ್ರ ಸರ್ಕಾರ ಪ್ರತಿಯೊಂದು ಜಿಲ್ಲಾ ಕೇಂದ್ರಗಳಲ್ಲಿ ವಿಮಾನ ನಿಲ್ದಾಣ ಸ್ಥಾಪಿಸಲು ಹಾಗೂ ವಿಮಾನಗಳನ್ನು ಒದಗಿಸಲು ಒಪ್ಪಿಗೆ ನೀಡಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರು) :

ಅ) ಇಲ್ಲ. ಕೇವಲ ಕೆಲವು ಆಯ್ದ ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ.

ಆ) ಬಳ್ಳಾರಿ, ಗುಲ್ಬರ್ಗಾ, ಹುಬ್ಬಳ್ಳಿ, ಮೈಸೂರು ಮತ್ತು ಹಾಸನ.

ಇ) ಬಳ್ಳಾರಿ - ರೂ. 24.36 (ಮಿಲಿಯನ್) ಮೇಲ್ದರ್ಜೆಗೇರಿಸಲು
ಗುಲ್ಬರ್ಗಾ - ರೂ. 84.90 ಮಿಲಿಯನ್ ಅಭಿವೃದ್ಧಿ ಪಡಿಸಲು
ಹುಬ್ಬಳ್ಳಿ - ರೂ. 28.50 ಮಿಲಿಯನ್ ಮೇಲ್ದರ್ಜೆಗೇರಿಸಲು
ಮೈಸೂರು - ರೂ. 100.80 ಮಿಲಿಯನ್ ಮೇಲ್ದರ್ಜೆಗೇರಿಸಲು
ಹಾಸನ - ರೂ. 932.50 ಮಿಲಿಯನ್ ಹೊಸ ನಿರ್ಮಾಣ